**ಒ.ಎಸ್.ನಂ. 4/22**
**ಡಿ. ಡಬ್ಲ್ಯೂ-1**

**ದಿನಾಂಕಃ 18.08.2025 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ಮಾಡಿಸಲಾಯಿತು.**

**ಪಾಟೀ ಸವಾಲು :- ವಾದಿ ಪರ ವಕೀಲರಿಂದಃ-**

ವಾದಿ ನನ್ನ ತಮ್ಮ. ವಾದಿ OS 8/12 ರಂತೆ ಭಾಗಾಂಶ ಕೋರಿ ಹುಣಸೂರು ನ್ಯಾಯಾಲಯದಲ್ಲಿ ದಾವೆ ಹೂಡಿದ್ದು, ದಾವೆಗೂ ಮುನ್ನ ಮಾಡಿಕೊಂಡ ವಿಭಾಗ ಪತ್ರದಂತೆ ಡಿಕ್ರಿ ಆಗಿರುತ್ತದೆ ಎಂದರೆ ಸರಿ. ಸದರಿ ತೀರ್ಪನ್ನು ಪ್ರಶ್ನಿಸಿ ಮೇಲ್ಮನವಿ ಸಲ್ಲಿಸಿರುತ್ತೇನೆ ಎಂದರೆ ಸರಿ. ಸದರಿ ಮೇಲ್ಮನವಿಯಲ್ಲಿ 1/3 ಭಾಗದಂತೆ ಎಲ್ಲರಿಗೂ ಭಾಗಾಂಶದ ಆದೇಶ ಆಗಿರುತ್ತದೆ ಎಂದರೆ ಸರಿ. ಸದರಿ ದಾವೆಯಲ್ಲಿ ಸರ್ವೇ ನಂ 173/3 ನ್ನು ಸೇರಿಸಲಾಗಿತ್ತು ಎಂದರೆ ಸರಿ. ನಂತರ ಮೇಲ್ಮನವಿಯಲ್ಲಿನ ಆದೇಶದಂತೆ ಅಂತಿಮ ಡಿಕ್ರಿಗಾಗಿ ಇದೇ ನ್ಯಾಯಾಲಯದಲ್ಲಿ ಅರ್ಜಿ ಸಲ್ಲಿಸಿರುತ್ತೇವೆ ಎಂದರೆ ಸರಿ. ಸದರಿ ಅಂತಿಮ ಡಿಕ್ರಿಯಲ್ಲಿ ನಾನು ಮತ್ತು ನನ್ನ ಸಹೋದರರು ರಾಜಿ ಮಾಡಿಕೊಂಡಿರುತ್ತೇವೆ ಎಂದರೆ ಸರಿ. ಸದರಿ ರಾಜಿಯಂತೆ ಸರ್ವೇ 173/3 ರಲ್ಲಿ 6 ಗುಂಟೆ ಜಮೀನು, ಅದೇ ರೀತಿ ವಾದಿಗೂ ಸಹ ಅದೇ ಜಮೀನಿನಲ್ಲಿ 6 ಗುಂಟೆ ಬಂದಿರುತ್ತದೆ ಎಂದರೆ ಸರಿ. ಸದರಿ ವಾದಿಗೆ ಸೇರಿದ 6 ಗುಂಟೆ ಜಮೀನಿಗೂ ನನಗೂ ಯಾವುದೇ ಸಂಬಂಧ ಇಲ್ಲ ಎಂದರೆ ಸರಿ. ನನ್ನ ಭಾಗಕ್ಕೆ ಬಂದ 6 ಗುಂಟೆ ಜಮೀನಿಗೂ ವಾದಿಗೂ ಯಾವುದೇ ಸಂಬಂಧ ಇಲ್ಲ ಎಂದರೆ ಸರಿ. ದಾವಾ ಸ್ವತ್ತಿಗೂ ನನಗೂ ಯಾವುದೇ ಸಂಬಂಧ ಇಲ್ಲ ಎಂದರೆ ಸರಿ. ನನ್ನ ಲಿಖಿತ ಹೇಳಿಕೆಯಲ್ಲಿ ಹೇಳಿದಂತೆ ವಾದಿ ನನ್ನ ಜಮೀನನ್ನು ಒತ್ತುವರಿ ಮಾಡಿಕೊಂಡಿರುತ್ತಾರೆ ಎಂದು ಹೇಳಿದ್ದು, ಯಾವ ದಿನಾಂಕದಂದು ಒತ್ತುವರಿ ಮಾಡಿಕೊಂಡಿರುತ್ತಾರೆ ಎಂದರೆ ದಿನಾಂಕ ನೆನಪಿಲ್ಲ 3 ವರ್ಷಗಳಿಂದ ಎಂದು ನುಡಿಯುತ್ತಾರೆ. ಎಷ್ಟು ಜಮೀನು ಒತ್ತುವರಿ ಮಾಡಿಕೊಂಡಿರುತ್ತಾರೆ ಎಂದರೆ 2 ಗುಂಟೆ ಎಂದು ನುಡಿಯುತ್ತಾರೆ. ಯಾವ ಕಡೆ 2 ಗುಂಟೆ ಜಮೀನು ಒತ್ತುವರಿ ಮಾಡಿಕೊಂಡಿದ್ದಾರೆ ಎಂದು ಸರ್ವೇ ಮಾಡಿಸಿದ್ದೀರಾ ಎಂದರೆ ಇಲ್ಲ ಎಂದು ನುಡಿಯುತ್ತಾರೆ. ಸರ್ವೇ ಮಾಡಿಸಲು ತೊಂದರೆ ಇದೆಯಾ ಎಂದರೆ ಒಟ್ಟು 3 ಎಕರೆ 14 ಗುಂಟೆ ಚೆಲುವೆಗೌಡ ಬಿನ್ ದಾಸೇಗೌಡ ಹೆಸರಿನಲ್ಲಿ ಇರುತ್ತದೆ ಎಂದು ನುಡಿಯುತ್ತಾರೆ.

ವಾದಿ 6 ಗುಂಟೆ ಜಮೀನನ್ನು ಸರ್ವೇ ಮಾಡಿಸಿರುತ್ತಾರೆ ಎಂದರೆ ಗೊತ್ತಿಲ್ಲ. 2 ಗುಂಟೆ ಒತ್ತುವರಿ ಮಾಡಿಕೊಂಡಿದ್ದಾರೆ ಎಂದು ಏನಾದರೂ ಕ್ರಮ ಕೈಗೊಂಡಿದ್ದೀರಾ ಎಂದರೆ ನಮ್ಮ ಹೆಸರಿನಲ್ಲಿ ಏನು ಇಲ್ಲ ಎಂದು ನುಡಿಯುತ್ತಾರೆ. ಸದರಿ ಸ್ವತ್ತು ವಾದಿಗೂ ಮತ್ತು ನಮಗೂ ಪಿತ್ರಾರ್ಜಿತ ಆಸ್ತಿ ಎಂದರೆ ಸರಿ. ದಾವಾ ಆಸ್ತಿಯಲ್ಲಿ ವಾದಿ ವ್ಯವಸಾಯ ಮಾಡಿಕೊಂಡು ಸ್ವಾಧೀನದಲ್ಲಿ ಇದ್ದು ನಾನು ತೊಂದರೆ ಕೊಟ್ಟಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಗೆ ವಾದಿ ಪರ ವಕೀಲರು ದಾವಾ ಸ್ವತ್ತಿನ ಛಾಯಾಚಿತ್ರವನ್ನು ತೋರಿಸಿ ಅದನ್ನು ಸಾಕ್ಷಿ ದಾವಾ ಸ್ವತ್ತು ಎಂದು ಒಪ್ಪಿಕೊಂಡ ಮೇರೆಗೆ ಸದರಿ ಛಾಯಾಚಿತ್ರವನ್ನು ನಿಪಿ 5 ಎಂದು ಗುರುತಿಸಲಾಯಿತು. ವಾದಿ 6 ಗುಂಟೆಗೆ ಮಾತ್ರ ತಂತಿ ಬೇಲಿ ಹಾಕಿಕೊಂಡಿದ್ದು 14 ಗುಂಟೆಗೂ ಸೇರಿ ಹಾಕಿದ್ದಾರೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ವಾದಿ ಸುಮಾರು ವರ್ಷಗಳ ಕಾಲ ಭಾಗ ಕೊಟ್ಟಿಲ್ಲ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಸದರಿ 6 ಗುಂಟೆಗೆ ಡಿಕ್ರಿ ಆಗಲು ತೊಂದರೆ ಇದೆಯಾ ಎಂದರೆ ನಮ್ಮಗಳ ಹೆಸರಿಗೆ ಪ್ರತ್ಯೇಕವಾಗಿ ದಾಖಲೆ ಆದ ನಂತರ ಮಾಡಿಕೊಳಲು ತೊಂದರೆ ಇರುವುದಿಲ್ಲ. ವಾದಿ ಖಾತೆ ಬದಲಾವಣೆಗೆ ಸಲ್ಲಿಸಿದ ಅರ್ಜಿಗೆ ತಕರಾರು ಕೊಟ್ಟಿರುತ್ತೇನೆ ಎಂದರೆ ಸರಿಯಲ್ಲ. ನನ್ನ ಜಮೀನನ್ನು ನನ್ನ ಹೆಸರಿಗೆ ಖಾತೆ ಮಾಡಿಸಿಕೊಳ್ಳಲು ಅರ್ಜಿ ಕೊಟ್ಟಿದ್ದೀರಾ ಎಂದರೆ ಇಲ್ಲ ಎಂದು ನುಡಿಯುತ್ತಾರೆ. ದಾವಾ ಸ್ವತ್ತಿಗೆ ಉದ್ದೇಶ ಪೂರ್ವಕವಾಗಿ ತೊಂದರೆ ಕೊಡುತ್ತಿದ್ದೇನೆ ಎಂದರೆ ಸರಿಯಲ್ಲ. ದಾವಾ ಸ್ವತ್ತಿನ ಮೇಲೆ ನನಗೆ ಯಾವುದೇ ಹಕ್ಕು ಹಿತಾಸಕ್ತಿ ಇಲ್ಲದೇ ಇದ್ದರೂ ಸುಳ್ಳು ತಕರಾರು ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಗಣಕೀಕರಣಗೊಳಿಸಲಾಯಿತು)

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ.ದ.ನ್ಯಾ.ದಂಡಾಧಿಕಾರಿಗಳು, ಹೆಚ್.ಡಿ. ಕೋಟೆ.**